ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 3869/2022

ಸಿ.ಡಬ್ಲ್ಯೂ -04
ಪಿ.ಡಬ್ಲ್ಯೂ-04

ಸಾಕ್ಷಿದಾರನ ಹೆಸರು :- ಆತ್ಮಾನಂದ
ತಂದೆಯ ಹೆಸರು :- ಕೆ. ಸೋಮಶೇಖರ
ವಯಸ್ಸು :- 46 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ನಿಡಸಾಲೆ

**ಸಾಕ್ಷಿಗೆ ದಿಃ 03.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 09.04.2020 ರಂದು ಬೆಳಿಗ್ಗೆ 9 ಗಂಟೆ ಸಮಯದಲ್ಲಿ ನಾನು ಚಾಸಾ 1 ರಿಂದ 3 ಅವರು ಮಾತನಾಡುತ್ತಾ ಕುಳಿತಿರುವಾಗ ಆರೋಪಿತರು ಅಲ್ಲಿಗೆ ಬಂದ ನನಗೆ ಗಲ್ಲಿಯ ವಿಚಾರವಾಗಿ ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು ಎಂದರೆ ಸರಿಯಲ್ಲ. ಚಾಸಾ 2 ಅವರು ಪ್ರಶ್ನೆ ಮಾಡಿದಕ್ಕೆ ಆರೋಪಿತರೆಲ್ಲರೂ ಬೈದು ಅವರನ್ನು ಎಳೆದಾಡಿ ಕೈಗಳಿಂದ ಹೊಡೆದು ಕಾಲುಗಳಿಂದ ಕುಳಿಯುತ್ತಿದ್ದರು ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ 3 ಜಗಳ ಬಿಡಿಸಲು ಹೋದಾಗ ಆರೋಪಿತರು ನನಗೂ ಸಹ ಅವಾಚ್ಯ ಶಬ್ದಗಳಿಂದ ಬೈದು ಆರೋಪಿ 1 ದೊಣ್ಣೆಯಿಂದ ನನ್ನ ಬೆನ್ನಿಗೆ ಹೊಡೆದಿದ್ದು ಆರೋಪಿ 2 ಕಲ್ಲಿನಿಂದ ಗುದ್ದಿ ನೊವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ.

ಚಾಸಾ 5 ಮತ್ತು 6 ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ದಿಃ 05.06.2020 ರಂದು ನಾನು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 3 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.